**ದಿನಾಂಕಃ 15.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ಶ್ರೀ ಪಿ ಡಿ ವಕೀಲರಿಂದಃ**

**Ex.R-2** True copy of MLC intimation issued by the Manipal Hospital, Mysore

**Ex.R-3** True copy of Accident book dated 16.06.2024 issued by the Medical record officer, MIMS Hospital, Mandya

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ಎನ್ ಎಂ ಎಂ ವಕೀಲರಿಂದಃ**

ಟ್ರ್ಯಾಕ್ಟರ್ ನ ಚಾಲಕನ ತಪ್ಪಿನಿಂದ ಅಪಘಾತ ಆಗಿದೆ ಎಂದು ಪೊಲೀಸರು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿಯು ಸುಳ್ಳು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದು ನುಡಿಯುತ್ತಾರೆ. ಪೊಲೀಸರು ಸುಳ್ಳು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದು ನ್ಯಾಯಾಲಯದಲ್ಲಿ ಪ್ರಶ್ನೆ ಮಾಡಿಲ್ಲ ಎಂದರೆ ಸಾಕ್ಷಿಯು 3 ನೇ ಪಕ್ಷಗಾರರಾದ್ದರಿಂದ ಪ್ರಶ್ನೆ ಮಾಡಿಲ್ಲ ಎಂದು ನುಡಿಯುತ್ತಾರೆ. ವಾಹನದ ಮಾಲೀಕರ (Insured) ಮೂಲಕ ದೋಷಾರೋಪಣಾ ಪತ್ರವನ್ನು ಪ್ರಶ್ನೆ ಮಾಡಿಲ್ಲ ಎಂದರೆ ಸರಿ. ಅಪಘಾತವನ್ನು ನಾನು ಪ್ರತ್ಯಕ್ಷವಾಗಿ ನೋಡಿಲ್ಲ ಎಂದರೆ ಸರಿ. ಅಪಘಾತ ಆದ ನಂತರ ಮೃತನಿಗೆ ಪ್ರಜ್ಞೆ ಇರಲಿಲ್ಲ ಮತ್ತು ಮಾತನಾಡುವ ಸ್ಥಿತಿಯಲ್ಲಿರಿಲಿಲ್ಲಎಂದರೆ ನನಗೆ ಗೊತ್ತಿಲ್ಲ. ನಿ ಆರ್ 2 ರಲ್ಲಿ ಅಭಿಷೇಕ್ ಎಂಬುವವರು ಅಪಘಾತದ ಬಗ್ಗೆ ಮಾಹಿತಿ ನೀಡಿರುತ್ತಾರೆ ಎಂದು ನಮೂದಿಸಿರುತ್ತಾರೆ ಎಂದರೆ ಸಾಕ್ಷಿಯು ಗಾಯಾಳುವನ್ನು ಅಭಿಷೇಕ್ ರವರು ಆಸ್ಪತ್ರೆಗೆ ಕರೆದುಕೊಂಡು ಬಂದಿರುವ ಬಗ್ಗೆ ನಮೂದಿಸಿರುತ್ತಾರೆ ಎಂದು ನುಡಿಯುತ್ತಾರೆ.

ಅಪಘಾತ ಹೇಗೆ ಆಯಿತು ಎಂಬುದನ್ನು ಅಭಿಷೇಕ್ ರವರು ಹೇಳಿ ಬರೆಸಿರುತ್ತಾರೆ ಎಂದರೆ ಸರಿ. ದ್ವಿಚಕ್ರ ವಾಹನ ಮತ್ತು ಟ್ರ್ಯಾಕ್ಟರ್ ನಡುವೆ ಅಪಘಾತ ಆಗಿದೆ ಎಂದರೆ ಸರಿ. ಅಪಘಾತದಿಂದ ಮಹೇಂದ್ರರವರು ಮೃತಪಟ್ಟಿರುತ್ತಾರೆ ಎಂದರೆ ಸಾಕ್ಷಿಯು ಮೃತ ವ್ಯಕ್ತಿಯ ಅತಿವೇಗ ಮತ್ತು ಅಜಾಗರೂಕತೆಯಿಂದ ಅಪಘಾತ ಆಗಿದೆ ಎಂದು ನುಡಿಯುತ್ತಾರೆ. ಮೃತ ವ್ಯಕ್ತಿಯ ಅತಿವೇಗ ಮತ್ತು ಅಜಾಗರೂಕತೆಯಿಂದ ಅಪಘಾತ ಆಗಿದೆ ಎಂದು ನನಗೆ ಖುದ್ದು ಮಾಹಿತಿ ಇಲ್ಲ ಎಂದರೆ ಸಾಕ್ಷಿಯು ವೈದ್ಯಕೀಯ ದಾಖಲಾತಿಗಳ ಆಧಾರದ ಮೇಲೆ ನನಗೆ ಗೊತ್ತಾಗಿರುತ್ತದೆ ಎಂದು ನುಡಿಯುತ್ತಾರೆ. ವೈದ್ಯಕೀಯ ದಾಖಲಾತಿಗಳಲ್ಲಿ ಮೃತ ವ್ಯಕ್ತಿಯ ಅತಿವೇಗ ಮತ್ತು ಅಜಾಗರೂಕತೆಯಿಂದ ಅಪಘಾತ ಆಗಿದೆ ಎಂದು ನಮೂದಾಗಿಲ್ಲ ಎಂದರೆ ಸಾಕ್ಷಿಯು ವೈದ್ಯಕೀಯ ದಾಖಲಾತಿಗಳಲ್ಲಿ ಮೃತ ವ್ಯಕ್ತಿಯೇ ಸ್ವತಃ ಟ್ರ್ಯಾಕ್ಟರ್ ಗೆ ಡಿಕ್ಕಿ ಪಡಿಸಿ ಅಪಘಾತ ಪಡಿಸಿರುತ್ತಾನೆ ಎಂದು ನಮೂದಿಸಿರುತ್ತಾರೆ ಎಂದು ನುಡಿಯುತ್ತಾರೆ. ಮೃತ ವ್ಯಕ್ತಿ ಅಪಘಾತ ಹೇಗೆ ಆಯಿತು ಎಂಬ ಬಗ್ಗೆ ಆಸ್ಪತ್ರೆಯಲ್ಲಿ ಮಾಹಿತಿಯನ್ನು ನೀಡಿಲ್ಲ ಎಂದರೆ ಸಾಕ್ಷಿಯು ಆ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ.

ಅಭಿಷೇಕ್ ರವರು ಅಪಘಾತದ ಪ್ರತ್ಯಕ್ಷ ಸಾಕ್ಷಿ ಅಲ್ಲ ಎಂದರೆ ಸಾಕ್ಷಿಯು ಆ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ನಾನು ಪೊಲೀಸ್ ದಾಖಲಾತಿಗಳನ್ನು ಓದಿ ತಿಳಿದುಕೊಂಡಿರುತ್ತೇನೆ. ದೋಷಾರೋಪಣಾ ಪತ್ರದಲ್ಲಿ ಪ್ರತ್ಯಕ್ಷ ಸಾಕ್ಷಿಗಳು ಯಾರು ಎಂದು ನಮೂದಾಗಿದೆ ಎಂದರೆ ಸರಿ. ದೋಷಾರೋಪಣಾ ಪತ್ರದಲ್ಲಿ ಚಂದನ್ ಕುಮಾರ್ ಮತ್ತು ರಾಜೇಶ್ ಎನ್ನುವವರು ಪ್ರತ್ಯಕ್ಷ ಸಾಕ್ಷಿದಾರರು ಎಂದು ನಮೂದಿಸಿರುತ್ತಾರೆ ಎಂದರೆ ಸರಿ. ಅಭಿಷೇಕ್ ರವರು ಅಪಘಾತದ ಪ್ರತ್ಯಕ್ಷ ಸಾಕ್ಷಿ ಅಲ್ಲದ ಕಾರಣ ಆಸ್ಪತ್ರೆಯಲ್ಲಿ ಅಪಘಾತದ ಬಗ್ಗೆ ತಪ್ಪು ಮಾಹಿತಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ಅಪಘಾತವು ಟ್ರ್ಯಾಕ್ಟರ್ ಚಾಲಕನ ತಪ್ಪಿನಿಂದ ಆಗಿದೆ ಎಂದು ಪೊಲೀಸರು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿಯು ಸುಳ್ಳು ದೋಷಾರೋಪಣಾ ಪತ್ರ ಸಲ್ಲಿಸಿರುತ್ತಾರೆ ಎಂದು ನುಡಿಯುತ್ತಾರೆ. ಮೃತನ ಕುಟುಂಬದವರಿಗೆ ಪರಿಹಾರ ನೀಡಬೇಕಾಗುತ್ತದೆ ಎಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸರಿ ಇದೆ

1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಚಾಮರಾಜನಗರ.